# ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 219
ಸದಸ್ಯರ ಹೆಸರು : ಶ್ರೀ ಎಂ.ಎ. ಗೋಪಾಲಸ್ವಾಮಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ)
ಉತ್ತರಿಸುವವರು : ಮಾನ್ಯ ಸಣ್ಣ ಕೈಗಾರಿಕೆ ಸಚಿವರು
ಉತ್ತರಿಸಬೇಕಾದ ದಿನಾಂಕ : 11.07.2018

| ಕ್ರ.ಸಂ. | ಪ್ರಶ್ನೆ | ಉತ್ತರ |
|---|---|---|
| ಅ) | ರಾಜ್ಯ ಸರ್ಕಾರ ಸಣ್ಣ ಕೈಗಾರಿಕೆಗಳಿಗೆ ಯಾವ ರೀತಿಯಲ್ಲಿ ನೆರವನ್ನು ನೀಡುತ್ತಿದೆ; ಸಣ್ಣ ಕೈಗಾರಿಕೆಗಳನ್ನು ಸ್ಥಾಪನೆ ಮಾಡಲು ಸರ್ಕಾರವು ನಿಗದಿಪಡಿಸಿರುವ ಮಾನದಂಡಗಳೇನು; | **ರಾಜ್ಯ ಸರ್ಕಾರ ಸಣ್ಣ ಕೈಗಾರಿಕೆಗಳಿಗೆ ನೀಡುತ್ತಿರುವ ನೆರವು ಮತ್ತು ಯೋಜನೆಗಳು:**<br>1. ಕರ್ನಾಟಕ ಸರ್ಕಾರದ ಮುಖ್ಯಮಂತ್ರಿಗಳ ಉದ್ಯೋಗ ಸೃಜನಾ ಯೋಜನೆಯಡಿ ಗ್ರಾಮೀಣ ಪ್ರದೇಶಗಳಲ್ಲಿ ಕೈಗಾರಿಕೆಗಳನ್ನು ಸ್ಥಾಪಿಸಲು ಗರಿಷ್ಠ ಯೋಜನಾ ವೆಚ್ಚ ರೂ. 10 ಲಕ್ಷಗಳವರೆಗೆ ಬ್ಯಾಂಕ್‌ಗಳ ಮೂಲಕ ಸಾಲ ಸೌಲಭ್ಯ ಒದಗಿಸಿ ಸಣ್ಣ ಉದ್ಯಮಗಳನ್ನು ಸ್ಥಾಪಿಸಿ ಸ್ವಯಂ ಉದ್ಯೋಗ ಕೈಗೊಳ್ಳಲು ಅನುಕೂಲ ಒದಗಿಸಲಾಗುವುದು ಹಾಗೂ ಯೋಜನಾ ವೆಚ್ಚದ ಮೇಲೆ ಶೇ. 25 ರಿಂದ ಶೇ.35 ರವರೆಗೆ ಗರಿಷ್ಠ ರೂ.2.50 ಲಕ್ಷದಿಂದ ರೂ.3.50 ಲಕ್ಷದವರೆಗೆ ಸಹಾಯಧನ ನೀಡಲಾಗುತ್ತಿದೆ.<br>2. ಕೇಂದ್ರ ಸರ್ಕಾರದ ಪ್ರಧಾನಮಂತ್ರಿಗಳ ಉದ್ಯೋಗ ಸೃಜನಾ ಯೋಜನೆಯಡಿ ನಗರ ಮತ್ತು ಗ್ರಾಮೀಣ ಪ್ರದೇಶಗಳಲ್ಲಿ ಕೈಗಾರಿಕೆಗಳನ್ನು ಸ್ಥಾಪಿಸಲು ಗರಿಷ್ಠ ಯೋಜನಾ ವೆಚ್ಚ ರೂ. 25 ಲಕ್ಷಗಳವರೆಗೆ ಬ್ಯಾಂಕ್‌ಗಳ ಮೂಲಕ ಸಾಲ ಸೌಲಭ್ಯ ಒದಗಿಸಿ ಸಣ್ಣ ಉದ್ಯಮಗಳನ್ನು ಸ್ಥಾಪಿಸಿ ಸ್ವಯಂ ಉದ್ಯೋಗ ಕೈಗೊಳ್ಳಲು ಅನುಕೂಲ ಒದಗಿಸಲಾಗುವುದು ಹಾಗೂ ಯೋಜನಾ ವೆಚ್ಚದ ಮೇಲೆ ಶೇ. 15 ರಿಂದ ಶೇ.35 ರವರೆಗೆ ಗರಿಷ್ಠ ರೂ.3.75 ಲಕ್ಷದಿಂದ ರೂ.8.75 ಲಕ್ಷದವರೆಗೆ ಸಹಾಯಧನ ನೀಡಲಾಗುತ್ತಿದೆ.<br>3. ನಿರುದ್ಯೋಗಿ ಯುವಕ ಯುವತಿಯರಿಗೆ ಉದ್ಯಮಶೀಲರಾಗಲು ಉದ್ಯಮಶೀಲತಾ ಅಭಿವೃದ್ಧಿ ಕಾರ್ಯಕ್ರಮ, ಉದ್ಯಮಶೀಲತಾ ಪ್ರೇರಣಾ ಶಿಬಿರ, ಕೊಳ್ಳುವವರ ಮತ್ತು ಮಾರಾಟಗಾರರ ಸಮಾವೇಶ ಮತ್ತು ಕಲಾವೈಭವ ವಸ್ತು ಪ್ರದರ್ಶನಗಳನ್ನು ನಡೆಸಲಾಗುತ್ತಿದೆ.<br>4. ಕರ್ನಾಟಕ ರಾಜ್ಯ ಹಣಕಾಸು ಸಂಸ್ಥೆಯ ಮೂಲಕ ಮಹಿಳಾ ಉದ್ದಿಮೆದಾರರಿಗೆ ಶೇಕಡ 4ರ ಬಡ್ಡಿ ದರದಲ್ಲಿ ರೂ.2.00 ಕೋಟಿಯವರೆಗೂ ಸಾಲ ಸೌಲಭ್ಯ ಒದಗಿಸಲಾಗುತ್ತಿದೆ.<br>5. ಕೈಗಾರಿಕಾ ಪ್ರದೇಶ ಮತ್ತು ಕೈಗಾರಿಕಾ ವಸಾಹತುಗಳಲ್ಲಿ ಅಭಿವೃದ್ಧಿಪಡಿಸಿದ ಕೈಗಾರಿಕಾ ನಿವೇಶನಗಳನ್ನು ಹಾಗೂ ಮಳಿಗೆಗಳ |

| | | |
|---|---|---|
| | | ಹಂಚಿಕೆ ಮಾಡಲಾಗುತ್ತಿದೆ.<br>6. ಪರಿಶಿಷ್ಟ ಜಾತಿಯ ಮತ್ತು ಪರಿಶಿಷ್ಟ ವರ್ಗದ ಉದ್ಯಮಶೀಲರಿಗೆ ವಿಶೇಷ ಘಟಕ ಉಪಯೋಜನೆ ಮತ್ತು ಗಿರಿಜನ ಉಪಯೋಜನೆಯಡಿಯಲ್ಲಿ ಶೇ 50 ರಿಯಾಯಿತಿ ದರದಲ್ಲಿ ಕೈಗಾರಿಕಾ ನಿವೇಶನಗಳನ್ನು (ಗರಿಷ್ಠ 2 ಎಕರೆ) ಮತ್ತು ಶೇ 90 ರಿಯಾಯಿತಿ ದರದಲ್ಲಿ ಕೈಗಾರಿಕಾ ಶೆಡ್‌ಗಳನ್ನು ನೀಡಲಾಗುತ್ತಿದೆ.<br>7. ಪರಿಶಿಷ್ಟ ಜಾತಿಯ ಮತ್ತು ಪರಿಶಿಷ್ಟ ವರ್ಗದ ಉದ್ಯಮಶೀಲರಿಗೆ ವಿಶೇಷ ಘಟಕ ಉಪಯೋಜನೆ ಮತ್ತು ಗಿರಿಜನ ಉಪಯೋಜನೆಯಡಿಯಲ್ಲಿ ಸ್ವಯಂ ಉದ್ಯೋಗ ಕೈಗೊಳ್ಳಲು ಶೇ 60 ರಷ್ಟು ಸಹಾಯಧನ ನೀಡಲಾಗುತ್ತಿದೆ.<br>8. ಪರಿಶಿಷ್ಟ ಜಾತಿ/ ಪರಿಶಿಷ್ಟ ಪಂಗಡದ ಉದ್ಯಮಶೀಲರು ಸ್ಥಾಪಿಸುವ ಕೈಗಾರಿಕಾ ಸಂಘ / ಸಂಸ್ಥೆ / ಟ್ರಸ್ಟ್ ಅಥವಾ ಶೇಕಡ 51 ಕ್ಕಿಂತ ಹೆಚ್ಚು ಇರುವ ಪರಿಶಿಷ್ಟ ಜಾತಿ / ಪರಿಶಿಷ್ಟ ಪಂಗಡದ ಸದಸ್ಯರನ್ನು ಒಳಗೊಂಡ ಇತರೆ ಸಂಘ/ ಸಂಸ್ಥೆಗಳಿಗೆ ಕೌಶಲ್ಯಾಭಿವೃದ್ಧಿ ತರಬೇತಿ ಕೇಂದ್ರಗಳನ್ನು / ಸಾಮಾನ್ಯ ಸೌಲಭ್ಯ ಕೇಂದ್ರಗಳ ಸ್ಥಾಪನೆಗೆ ಸಂಬಂಧಪಟ್ಟಂತೆ ಕಟ್ಟಡ ನಿರ್ಮಾಣ ಮತ್ತು ಯಂತ್ರೋಪಕರಣ/ ಉಪಕರಣಗಳ ಖರೀದಿಗೆ ಗರಿಷ್ಠ ರೂ.20.00 ಲಕ್ಷ ಅನುದಾನವನ್ನು ನೀಡಲಾಗುತ್ತಿದೆ.<br>9. ಪರಿಶಿಷ್ಟ ಜಾತಿಯ ಮತ್ತು ಪರಿಶಿಷ್ಟ ವರ್ಗದ ಉದ್ಯಮಿದಾರರು ಬ್ಯಾಂಕ್/ ಹಣಕಾಸು ಸಂಸ್ಥೆಗಳಿಂದ ಸಾಲ ಪಡೆದು ಸ್ಥಾಪಿಸುವ ಹೊಸ/ ಆಧುನೀಕರಣ/ ತಾಂತ್ರಿಕ ಉನ್ನತೀಕರಣ/ ವಿಸ್ತರಣೆ/ ಚಟುವಟಿಕೆ ಬದಲಾವಣೆ ಘಟಕಗಳಿಗೆ ಯೋಜನಾ ವೆಚ್ಚದಲ್ಲಿ The Debt Equity Ratio 2:1 ಪ್ರಕಾರ (2/3 ರಷ್ಟು ಬ್ಯಾಂಕ್/ ಹಣಕಾಸು ಸಂಸ್ಥೆಗಳಿಂದ ಸಾಲ ಮತ್ತು 1/3 ಪ್ರವರ್ತಕರ ಬಂಡವಾಳ) ಘಟಕಕ್ಕೆ ಪ್ರವರ್ತಕರ ಬಂಡವಾಳ ಹೂಡಿಕೆಯ 1/3 ರಲ್ಲಿ ಶೇ.50 ರಷ್ಟು ಬಡ್ಡಿ ರಹಿತ ಗರಿಷ್ಠ ರೂ.75 ಲಕ್ಷ ಸಾಫ್ಟ್ ಸೀಡ್ ಕ್ಯಾಪಿಟಲ್ ಆರ್ಥಿಕ ಸಹಾಯ ನೀಡಲಾಗುತ್ತಿದೆ.<br>10. ದಿನಾಂಕ:01–04–2017 ರಿಂದ ಮೊದಲ ಬಾರಿಗೆ ಪರಿಶಿಷ್ಟ ಜಾತಿ / ಪರಿಶಿಷ್ಟ ಪಂಗಡದವರು ಸ್ಥಾಪಿಸುವ ಸಣ್ಣ ಮತ್ತು ಅತೀ ಸಣ್ಣ ಘಟಕಗಳೂ ಸಾಲ ಪಡೆಯುವ ಸಂದರ್ಭದಲ್ಲಿ ಕೆಎಸ್.ಎಫ್.ಸಿ ಮತ್ತು ಇತರೇ ಹಣಕಾಸು ಸಂಸ್ಥೆಯವರು ವಿಧಿಸುವ ಪರಿಷ್ಕರಣಾ ಶುಲ್ಕ, ಕಾನೂನು ಶುಲ್ಕ, ಏಕಕಾಲಿಕ ಸಾಲ ವಿತರಣಾ ಶುಲ್ಕ ಮತ್ತು ಇತರೆ ಶುಲ್ಕಗಳನ್ನು ಭರಿಸಲಾಗುತ್ತಿದೆ.<br>11. ಪರಿಶಿಷ್ಟ ಜಾತಿ/ ಪರಿಶಿಷ್ಟ ಪಂಗಡದ ಉದ್ಯಮಶೀಲರು ದಿನಾಂಕ:01–04–2017 ರಿಂದ ಪ್ರಾರಂಭಿಸುವ ಹೊಸ ಸಣ್ಣ ಮತ್ತು ಅತೀ ಸಣ್ಣ ಕೈಗಾರಿಕಾ ಘಟಕಗಳಿಗೆ ಮೊದಲ 5 ವರ್ಷಗಳ ಅವಧಿಗೆ ಪ್ರತಿ ಯುನಿಟ್‌ಗೆ 2 ರೂ.ಗಳಷ್ಟು ವಿದ್ಯುಚ್ಛಕ್ತಿ ಸಹಾಯಧನ ನೀಡಲಾಗುತ್ತಿದೆ.<br>12. ಖಾದಿ ಸಂಘ ಸಂಸ್ಥೆಗಳು ಉತ್ಪಾದಿಸುತ್ತಿರುವ ಖಾದಿ ಉತ್ಪನ್ನಗಳಿಗೆ ಹೆಚ್ಚಿನ ಮಾರುಕಟ್ಟೆ ಒದಗಿಸುವ ದೃಷ್ಟಿಯಿಂದ ಹಾಗೂ ಕಸುಬುದಾರರಿಗೆ ನಿರಂತರ ಉದ್ಯೋಗವಕಾಶ ನೀಡುವ ದೃಷ್ಟಿಯಿಂದ ಪ್ರೋತ್ಸಾಹ ಮಜೂರಿ ಅನುದಾನವನ್ನು ಖಾದಿ ಸಂಘ:ಸಂಸ್ಥೆಗಳಲ್ಲಿ ದುಡಿಯುತ್ತಿರುವ ನೂಲುಗಾರರು, ನೇಕಾರರು ಹಾಗೂ ಖಾದಿ ಕಾರ್ಯಕರ್ತರಿಗೆ ಬಿಡುಗಡೆ ಮಾಡಲಾಗುತ್ತಿದೆ. |

| | | |
|---|---|---|
| | | 13. ಕೇಂದ್ರ ಸರ್ಕಾರದ ಸೂಕ್ಷ್ಮ ಹಾಗೂ ಸಣ್ಣ ಕೈಗಾರಿಕೆಗಳ ಗುಂಪು ಅಭಿವೃದ್ಧಿ ಯೋಜನೆ (ಎಎಸ್‌ಸಿ-ಸಿಡಿಪಿ) ಮೂಲಕ ಆರ್ಥಿಕ ನೆರವು ಒದಗಿಸಲಾಗುತ್ತಿದೆ.<br>14. ಸಣ್ಣ ಕೈಗಾರಿಕೆಗಳ ಅಭಿವೃದ್ಧಿಗಾಗಿ ಕರ್ನಾಟಕ ಸರ್ಕಾರವು ಕೈಗಾರಿಕಾ ನೀತಿ 2014-19 ನ್ನು ಜಾರಿಗೆ ತಂದಿದ್ದು ತಾಲ್ಲೂಕುಗಳನ್ನು ಹೈದ್ರಾಬಾದ್-ಕರ್ನಾಟಕ ಮತ್ತು ಹೈದ್ರಾಬಾದ್-ಕರ್ನಾಟಕೇತರ ತಾಲ್ಲೂಕುಗಳೆಂದು ಮತ್ತು ಕೈಗಾರಿಕೆಗಳ ಸಾಂದ್ರತೆ ಮೇಲೆ 4 ವಲಯಗಳಾಗಿ ವಿಂಗಡಿಸಿದ್ದು ವಲಯಗಳ ಆಧಾರದ ಮೇಲೆ, ಉದ್ಯಮಶೀಲರ ವರ್ಗದ ಮೇಲೆ, ಚಟುವಟಿಕೆಯನ್ನು ಆಧರಿಸಿ ಕೆಳಕಾಣಿಸಿದ ಪ್ರೋತ್ಸಾಹ ಮತ್ತು ರಿಯಾಯಿತಿ ಸೌಲಭ್ಯಗಳನ್ನು ಅರ್ಹ ಕೈಗಾರಿಕೆಗಳಿಗೆ ನೀಡಿ ಉತ್ತೇಜಿಸಲಾಗುತ್ತಿದೆ.<br>• ಮುದ್ರಾಂಕ ಶುಲ್ಕ ವಿನಾಯಿತಿ ಮತ್ತು ನೋಂದಣಿ ಶುಲ್ಕ ರಿಯಾಯಿತಿ.<br>• ಬಂಡವಾಳ ಹೂಡಿಕೆ ಸಹಾಯಧನ<br>• ಬಡ್ಡಿ ಸಹಾಯಧನ<br>• ಭೂ ಪರಿವರ್ತನಾ ಶುಲ್ಕ ಮರುಪಾವತಿ.<br>• ಪ್ರವೇಶ ತೆರಿಗೆ ವಿನಾಯಿತಿ.<br>• ಕೃಷಿ ಉತ್ಪನ್ನ ಮಾರುಕಟ್ಟೆ ತೆರಿಗೆಯಿಂದ ವಿನಾಯಿತಿ.<br>• ತ್ಯಾಜ್ಯ ಸಂಸ್ಕರಣಾ ಯಂತ್ರ ಸ್ಥಾಪನೆಗೆ ಸಹಾಯಧನ.<br>• ವಿದ್ಯುತ್ ತೆರಿಗೆ ವಿನಾಯಿತಿ<br>• ತಾಂತ್ರಿಕ ಉನ್ನತೀಕರಣ, ಗುಣಮಟ್ಟ ಪ್ರಮಾಣ ಪತ್ರ & ಪೇಟೆಂಟ್ ನೋಂದಣಿ ಸಹಾಯಧನ<br>• ಮಳೆ ನೀರು ಕೊಯ್ಲು / ಸಂರಕ್ಷಣೆ ಸಹಾಯಧನ<br>• ಶಕ್ತಿ ಸಂರಕ್ಷಣೆ ಸಹಾಯಧನ<br>• ಯೋಜನಾ ವರದಿ ತಯಾರಿಕಾ ವೆಚ್ಚ ಮರುಪಾವತಿ<br>ಸಣ್ಣ ಕೈಗಾರಿಕೆಗಳನ್ನು ಸ್ಥಾಪನೆ ಮಾಡಲು ಸರ್ಕಾರವು ನಿಗದಿ -ಪಡಿಸಿರುವ ಮಾನ ದಂಡಗಳು :<br>ರಾಜ್ಯದಲ್ಲಿ ಸಣ್ಣ ಕೈಗಾರಿಕೆಗಳನ್ನು ಸ್ಥಾಪಿಸಲು ಯಾವುದೇ ಮಾನದಂಡಗಳಿರುವುದಿಲ್ಲ. ಯಾವುದೇ ಉದ್ದಿಮೆದಾರರು ಆಸಕ್ತಿ ಇದ್ದಲ್ಲಿ ಸಣ್ಣ ಕೈಗಾರಿಕೆಗಳನ್ನು ಸ್ಥಾಪಿಸಬಹುದು. ಆದಾಗ್ಯೂ ಕೈಗಾರಿಕೆಯನ್ನು ಪ್ರಾರಂಭಿಸಲು ಭೂಮಿ ಬೇಕಾದಲ್ಲಿ |

<table>
<tr><td></td><td></td><td>ಕೆಐಎಡಿಬಿ/ಕೆಎಸ್‌ಎಸ್‌ಐಡಿಸಿ ವತಿಯಿಂದ ಭೂ ಮಂಜೂರಾತಿ ಪಡೆಯ ಬೇಕಾಗಿರುತ್ತದೆ. ಸ್ವಂತ ಭೂಮಿಯಲ್ಲಿ ಉದ್ದಿಮೆಯನ್ನು ಸ್ಥಾಪಿಸುವವರು ಕೈಗಾರಿಕೆಯನ್ನು ಸ್ಥಾಪಿಸಲು ಕಂದಾಯ ಇಲಾಖೆಯಿಂದ ಭೂಪರಿವರ್ತನೆಯನ್ನು ಪಡೆಯಬೇಕಾಗಿರುತ್ತದೆ. ನಗರಸಭೆ, ಪುರಸಭೆ, ಗ್ರಾಮ ಪಂಚಾಯ್ತಿ, ಸೆಸ್, ಕೆಎಸ್‌ಪಿಸಿಬಿ, ಅರಣ್ಯ ಇಲಾಖೆ ಮುಂತಾದವುಗಳಿಂದ ಅಧಿಕೃತ ಪರವಾನಗಿ/ಮಂಜೂರಾತಿಯನ್ನು ಪಡೆಯಬೇಕಾಗಿರುತ್ತದೆ.</td></tr>
<tr><td>ಆ)</td><td>ಹಾಸನ ಜಿಲ್ಲೆಯಲ್ಲಿರುವ ಸಣ್ಣ ಕೈಗಾರಿಕೆಗಳ ಸಂಖ್ಯೆ ಎಷ್ಟು; (ತಾಲ್ಲೂಕುವಾರು, ಕೈಗಾರಿಕೆವಾರು ಪೂರ್ಣ ಮಾಹಿತಿ ನೀಡುವುದು) ಹಾಸನ ಜಿಲ್ಲೆಯಲ್ಲಿ ಸಣ್ಣ ಕೈಗಾರಿಕೆಗಳಿಂದ ಸ್ವಯಂ ಉದ್ಯೋಗಿಗಳಾದವರ ಸಂಖ್ಯೆ ಎಷ್ಟು;</td><td>ಪ್ರಾರಂಭದಿಂದಲೂ ಇಲ್ಲಿಯವರೆಗೆ ಹಾಸನ ಜಿಲ್ಲೆಯಲ್ಲಿ ನೋಂದಣಿಯಾಗಿರುವ ಕೈಗಾರಿಕೆಗಳ ಸಂಖ್ಯೆ: 15,193 ಇದ್ದು 61,258 ಜನರಿಗೆ ಉದ್ಯೋಗಾವಕಾಶ ಕಲ್ಪಿಸಲಾಗಿರುತ್ತದೆ. ತಾಲ್ಲೂಕುವಾರು ವಿವರ ಕೆಳಗಿನಂತಿದೆ.
<table>
<tr><th>ಕ್ರ.ಸಂ</th><th>ತಾಲ್ಲೂಕು</th><th>ಕೈಗಾರಿಕೆಗಳ ಸಂಖ್ಯೆ</th><th>ಉದ್ಯೋಗಿಗಳ ಸಂಖ್ಯೆ</th></tr>
<tr><td>1</td><td>ಆಲೂರು</td><td>958</td><td>3067</td></tr>
<tr><td>2</td><td>ಅರಕಲಗೂಡು</td><td>1314</td><td>3455</td></tr>
<tr><td>3</td><td>ಅರಸೀಕೆರೆ</td><td>3717</td><td>10937</td></tr>
<tr><td>4</td><td>ಬೇಲೂರು</td><td>1432</td><td>4247</td></tr>
<tr><td>5</td><td>ಚನ್ನರಾಯಪಟ್ಟಣ</td><td>2452</td><td>8164</td></tr>
<tr><td>6</td><td>ಹಾಸನ</td><td>2633</td><td>21925</td></tr>
<tr><td>7</td><td>ಹೊಳೇನರಸೀಪುರ</td><td>1416</td><td>4329</td></tr>
<tr><td>8</td><td>ಸಕಲೇಶಪುರ</td><td>1271</td><td>5134</td></tr>
<tr><td colspan="2">ಒಟ್ಟು</td><td>15193</td><td>61258</td></tr>
</table>
ಕಳೆದ ಮೂರು ವರ್ಷಗಳಲ್ಲಿ ಪ್ರಧಾನಮಂತ್ರಿಯವರ ಉದ್ಯೋಗ ಸೃಜನೆ ಯೋಜನೆ ಮತ್ತು ಮುಖ್ಯಮಂತ್ರಿಯವರ ಸ್ವಯಂ ಉದ್ಯೋಗ ಸೃಜನೆ ಯೋಜನೆಯಡಿಯಲ್ಲಿ ಬ್ಯಾಂಕ್‌ಗಳ ಮೂಲಕ ಸಾಲಪಡೆದು ಇಲಾಖೆಯ ಮೂಲಕ ಸಹಾಯಧನ ಪಡೆದು ಕೈಗಾರಿಕಾ ಘಟಕಗಳನ್ನು ಸ್ಥಾಪಿಸಿ ಸ್ವಯಂ ಉದ್ಯೋಗಿಗಳಾದವರು ಒಟ್ಟು 216.<br><br>ವರ್ಷವಾರು, ತಾಲ್ಲೂಕುವಾರು ಕೈಗಾರಿಕೆವಾರು, ಫಲಾನುಭವಿವಾರು, ಜಾತಿವಾರು, ಲಿಂಗವಾರು ವಿವರಗಳನ್ನು ಅನುಬಂಧದಲ್ಲಿ ನೀಡಲಾಗಿದೆ.</td></tr>
</table>

| | | |
|---|---|---|
| ಇ) | ಸಣ್ಣ ಕೈಗಾರಿಕೆಗಳನ್ನು ಸ್ಥಾಪಿಸುವ ಮೂಲಕ ಶ್ರವಣಬೆಳಗೊಳ ವಿಧಾನ ಸಭಾ ಕ್ಷೇತ್ರದಲ್ಲಿ ಸ್ವಯಂ ಉದ್ಯೋಗಗಳನ್ನು ಹೆಚ್ಚಿಸುವ ಕುರಿತು ಸರ್ಕಾರ ಚಿಂತನೆ ನಡೆಸಿದೆಯೇ; ಹಾಗಿದ್ದಲ್ಲಿ, ಯಾವ ರೀತಿ ಸ್ವಯಂ ಉದ್ಯೋಗಗಳನ್ನು ಹೆಚ್ಚಿಸಲಾಗುವುದು? (ವಿವರ ನೀಡುವುದು) | ಶ್ರವಣಬೆಳಗೊಳ ವಿಧಾನಸಭಾ ಕ್ಷೇತ್ರದಲ್ಲಿ ಸ್ವಯಂ ಉದ್ಯೋಗಗಳನ್ನು ಹೆಚ್ಚಿಸಲು ಸರ್ಕಾರವು ಉಪ ಪ್ರಶ್ನೆ (ಅ) ರಲ್ಲಿ ವಿವರಿಸಲಾಗಿರುವ ನೆರವು ಮತ್ತು ಯೋಜನೆಗಳನ್ನು ಅನುಷ್ಠಾನಗೊಳಿಸುತ್ತಿದೆ. ಸ್ವಯಂ ಉದ್ಯೋಗದ ಕುರಿತು ಪ್ರಚಾರ ಕಾರ್ಯಕ್ರಮಗಳು, ಉದ್ಯಮಶೀಲತಾಭಿವೃದ್ಧಿ ಕಾರ್ಯಕ್ರಮ, ಉದ್ಯಮಶೀಲತಾ ಪ್ರೇರಣಾ ಶಿಬಿರಗಳನ್ನು ಆಯೋಜಿಸಲಾಗುತ್ತಿದೆ. |

**ಸಿಐ 65 ಸಿಎಸ್‌ಸಿ 2018**

[ಎಸ್.ಆರ್. ಶ್ರೀನಿವಾಸ್ (ವಾಸು)]
ಸಣ್ಣ ಕೈಗಾರಿಕೆ ಸಚಿವರು